ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

19

ಇಲಾಖೆ / ವಿಷಯ : DEPARTMENT / SUBJECT: ಕೇಂದ್ರ ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 20/8/20

# ಇನ್ನು ಏಕ ಏಕ್ಸಾಂ

ಉ.ವಾ 20/8/20

## ರಾಷ್ಟ್ರೀಯ ನೇಮಕ ಏಜೆನ್ಸಿಗೆ ಕೇಂದ್ರ ಸಂಪುಟ ಒಪ್ಪಿಗೆ

## ದೇಶದ ಕೋಟ್ಯಂತರ ಉದ್ಯೋಗ ಆಕಾಂಕ್ಷಿಗಳಿಗೆ ಲಾಭ

ನವದೆಹಲಿ: ದೇಶದ ಉನ್ನತ ಶಿಕ್ಷಣಕ್ಕೆ ರಾಷ್ಟ್ರವ್ಯಾಪಿ ಒಂದೇ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ನಡೆಸುವ ರೀತಿಯಲ್ಲೇ, ವಿವಿಧ ಸರ್ಕಾರಿ ವಲಯಗಳಲ್ಲಿರುವ ಜನರ ನೇಮಕಾತಿಗಾಗಿ ರಾಷ್ಟ್ರವ್ಯಾಪ್ತಿ ಒಂದೇ ನೇಮಕ ಪರೀಕ್ಷೆ ನಡೆಸುವ ಕ್ರಾಂತಿಕಾರಿ ನಿರ್ಧಾರವನ್ನು ಕೇಂದ್ರ ಸರ್ಕಾರ ಕೈಗೊಂಡಿದೆ. ಇದರಿಂದ, ಕೇಂದ್ರ ಸರ್ಕಾರದ 20ಕ್ಕೂ ಹೆಚ್ಚು ವಲಯಗಳಲ್ಲಿನ ಉದ್ಯೋಗಗಳಿಗಾಗಿ ವರ್ಷದಲ್ಲಿ ನಡೆಸಲಾಗುತ್ತಿದ್ದ ಹಲವಾರು ಪರೀಕ್ಷೆಗಳಿಗಾಗಿ ಸಿದ್ಧತೆ ನಡೆಸುವ ಜಂಜಾಟದಿಂದ ಕೋಟ್ಯಂತರ ಯುವಜನರು ಮುಕ್ತಿ ಹೊಂದಲಿದ್ದಾರೆ.

ಏಕೈಕ ನೇಮಕ ಪರೀಕ್ಷೆಗಾಗಿ ರಾಷ್ಟ್ರೀಯ ನೇಮಕ ಏಜೆನ್ಸಿಯನ್ನು (ಎನ್‌ಆರ್‌ಎ) ರಚಿಸಲು ಕೇಂದ್ರ ಸರ್ಕಾರ ತೀರ್ಮಾನಿಸಿದ್ದು,



ಈ ಕುರಿತಂತೆ ಸಲ್ಲಿಸಲಾಗಿದ್ದ ಪ್ರಸ್ತಾವನೆಗೆ, ಬುಧವಾರ ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ.

ಸಂಪುಟದ ಒಪ್ಪಿಗೆಯ ಬಗ್ಗೆ ಟ್ವೀಟ್ ಮಾಡಿರುವ ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್ ಈ ವಿಚಾರವನ್ನು ತಿಳಿಸಿದ್ದಾರೆ.

**ಅನುದಾನ ಬಿಡುಗಡೆ:** ಏಜೆನ್ಸಿ ರಚನೆಗೆ ಕೇಂದ್ರ ಸರ್ಕಾರ ಈಗಾಗಲೇ 1,517.57 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿದೆ. ಈ ಹಣವನ್ನು ಆಯೋಗದ ಮುಂದಿನ ಮೂರು ವರ್ಷಗಳ ನಿರ್ವಹಣೆಗೆ ಬಳಸಲು ನಿರ್ಧರಿಸಲಾಗಿದೆ. ಆರಂಭದಲ್ಲಿ 117 ಜಿಲ್ಲೆಗಳಲ್ಲಿ ಪ್ರವೇಶ ಪರೀಕ್ಷೆ ನಡೆಸಲು ಎನ್‌ಆರ್‌ಎಗೆ ಬೇಕಾದ ಖರ್ಚು-ವೆಚ್ಚಗಳನ್ನು ಪ್ರತ್ಯೇಕವಾಗಿ ಸರ್ಕಾರವೇ ನೀಡಲಿದೆ.

**ಮೂರು ವಿಮಾನ ನಿಲ್ದಾಣಗಳ ನಿರ್ವಹಣೆ ಖಾಸಗಿಗೆ:** ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ (ಎಎಐ) ನಿರ್ವಹಣೆಯಲ್ಲಿರುವ ಜೈಪುರ, ಗುವಾಹಟಿ ಹಾಗೂ ತಿರುವನಂತಪುರ ವಿಮಾನ ನಿಲ್ದಾಣಗಳನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಡಿ (ಪಿಪಿಪಿ) ನಿರ್ವಹಣೆಗೆ ಒಪ್ಪಿಸುವ ಪ್ರಸ್ತಾವನೆಗೆ ಕೇಂದ್ರ ಸಂಪುಟದಲ್ಲಿ ಒಪ್ಪಿಗೆ ನೀಡಲಾಗಿದೆ. 2018ರಲ್ಲಿ ಲಖ್ನೋ, ಅಹ್ಮದಾಬಾದ್, ಜೈಪುರ, ಮಂಗಳೂರು, ತಿರುವನಂತಪುರ ಹಾಗೂ ಗುವಾಹಟಿ ವಿಮಾನ ನಿಲ್ದಾಣಗಳನ್ನು ಖಾಸಗಿಗೆ ಒಪ್ಪಿಸಲು ಕೇಂದ್ರ ಸರ್ಕಾರ ನಿರ್ಧರಿಸಿತ್ತು. ಇವುಗಳಲ್ಲಿ ಆರು ನಿಲ್ದಾಣಗಳ ನಿರ್ವಹಣೆಗಾಗಿ 2019ರ ಫೆಬ್ರವರಿಯಲ್ಲಿ ಕರೆಯಲಾಗಿದ್ದ ಬಿಡ್ ಅನ್ನು ಅದಾನಿ ಎಂಟರ್‌ಪ್ರೈಸಸ್ ಸಂಸ್ಥೆ ಗೆದ್ದಿತ್ತು.






### ಪ್ರಮುಖ ಅನುಕೂಲಗಳು

1. ಪ್ರೌಢಶಿಕ್ಷಣ, 12ನೇ ತರಗತಿ ಹಾಗೂ ಪದವಿ - ಈ ಮೂರು ಹಂತಗಳಲ್ಲಿ ಪ್ರತಿ ವರ್ಷ ನೇಮಕ ಪರೀಕ್ಷೆ
2. ಸಿಬ್ಬಂದಿ ನೇಮಕಾತಿ ಆಯೋಗ (ಎಸ್‌ಎಸ್‌ಸಿ), ರೈಲ್ವೆ ನೇಮಕಾತಿ ಮಂಡಳಿ (ಆರ್‌ಆರ್‌ಬಿ) ಹಾಗೂ ಬ್ಯಾಂಕಿಂಗ್ ಸಿಬ್ಬಂದಿ ನೇಮಕಾತಿ ಸಂಸ್ಥೆ (ಐಬಿಪಿಎಸ್) ಸೇರಿ 20ಕ್ಕೂ ಹೆಚ್ಚು ಪರೀಕ್ಷೆಗಳು ಇನ್ನು ಇರಲ್ಲ.
3. ಅಭ್ಯರ್ಥಿಗಳಿಗೆ ಖರ್ಚು ವೆಚ್ಚ ಉಳಿತಾಯ. ಬಡ, ಗ್ರಾಮೀಣ ಅಭ್ಯರ್ಥಿಗಳಿಗೆ ಅನುಕೂಲ
4. ತಮ್ಮಿಷ್ಟದ ಪರೀಕ್ಷಾ ಕೇಂದ್ರಗಳನ್ನು ಆಯ್ದುಕೊಳ್ಳಲು ಅಭ್ಯರ್ಥಿಗಳಿಗೆ ಅವಕಾಶ.
5. ಅಭ್ಯರ್ಥಿ ಗಳಿಸಿದ ಅಂಕ ಅಥವಾ ರ್‍ಯಾಂಕ್, ಪರೀಕ್ಷಾ ಫಲಿತಾಂಶ ಹೊರಬಿದ್ದ ದಿನಾಂಕದಿಂದ ಮೂರು ವರ್ಷಗಳವರೆಗೆ ಮಾನ್ಯವಾಗಿರುತ್ತದೆ.
6. ಅಭ್ಯರ್ಥಿಗೆ ವಯೋಮಿತಿ ಇರಲಿದೆಯಾದರೂ, ಅಭ್ಯರ್ಥಿಗಳು ಎಷ್ಟು ಬಾರಿ ಬೇಕಾದರೂ ಪರೀಕ್ಷೆ ಬರೆಯಬಹುದು.
7. ಎಸ್‌ಸಿ, ಎಸ್ಟಿ, ಒಬಿಸಿ ಅಭ್ಯರ್ಥಿಗಳ ವಯೋಮಿತಿಯಲ್ಲಿ ರಿಯಾಯಿತಿ ಉಂಟು.